| O.S 89/2023 | PW-1 |
|---|---|

ಸಾಕ್ಷಿಗೆ ವಿಧಿಬದ್ಧವಾಗಿ ದಿನಾಂಕ 26.09.2024 ರಂದು ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ– ವಾದಿ ಪರ ವಕೀಲರಾದಃ ಶ್ರೀ KBSS ರವರಿಂದ:–**

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಾನು ಕೊಟ್ಟ ಮಾಹಿತಿಯ ಮೇರೆಗೆ ವಕೀಲರು ತಯಾರಿಸಿರುತ್ತಾರೆ. ನಾನು ಅದರಲ್ಲಿರುವ ಎಲ್ಲಾ ಅಂಶಗಳನ್ನು ತಿಳಿದುಕೊಂಡು ನಂತರ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ.

ಸರ್ವೆ ನಂಬರ್ 21/5 ಇದಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–1 ಎಂದು ಗುರುತಿಸಲಾಯಿತು.

ಸರ್ವೆ ನಂಬರ್ 21/6 ಇದಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–2 ಎಂದು ಗುರುತಿಸಲಾಯಿತು.

ಸರ್ವೆ ನಂಬರ್ 21/7 ಇದಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–3 ಎಂದು ಗುರುತಿಸಲಾಯಿತು.

ನಮ್ಮ ಕುಟುಂಬದ ವಂಶವೃಕ್ಷದ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ–4 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದಿನ ಮುಖ್ಯ ವಿಚಾರಣೆಗೆ ಸಮಯಾವಕಶವನ್ನು ಕೋರಿದ್ದರಿಂದ ಆಲಿಸಿ ನೀಡಲಾಯಿತು)
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

26.09.2024
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದ ನ್ಯಾಯಾಲಯ ಯಳಂದೂರು.